ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

ARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

14

ಶಾಖೆ / ವಿಷಯ : DEPARTMENT / SUBJECT: ಬಿ. ಬಿ. ಎಂ. ಪಿ.

ಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ ದಿನಾಂಕ : DATE : 25/8/2020

ಬಿಬಿಎಂಪಿ ವಿಧೇಯಕದ ಬಗ್ಗೆ ಪರಿಶೀಲನಾ ಸಮಿತಿ ಸಭೆ

ಬೆಂಗಳೂರು: ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) ವಿಧೇಯಕವನ್ನು ಪರಿಶೀಲಿಸಲು ರಚಿಸಿರುವ ವಿಧಾನಮಂಡಲ ಜಂಟಿ ಪರಿಶೀಲನಾ ಸಮಿತಿಯ ಮೊದಲ ಸಭೆ ವಿಧಾನಸೌಧದಲ್ಲಿ ಜರುಗಿತು. ಸಭೆಯಲ್ಲಿ ವಿಧೇಯಕದಲ್ಲಿನ ಅಂಶಗಳ ಕುರಿತು ಚರ್ಚಿಸಿ ಯಾವ ಅಂಶಗಳಲ್ಲಿ ಬದಲಾವಣೆ ತರಬೇಕು ಎಂಬುದರ ಕುರಿತು ಚರ್ಚೆ ನಡೆಸಲಾಯಿತು. ಸಭೆಯ ಬಳಿಕ ಮಾತನಾಡಿದ ಬಿಬಿಎಂಪಿ ಆಯುಕ್ತ ಮಂಜುನಾಥ್ ಪ್ರಸಾದ್, ಬೆಂಗಳೂರಿಗೆ ಹೊಸ ಕಾಯ್ದೆ ತರುವ ನಿಟ್ಟಿನಲ್ಲಿ ಚರ್ಚೆ ನಡೆಸಲಾಗಿದೆ. ಕಾಯ್ದೆ ರಚನೆಗೆ ಕರಡು ತಯಾರಿ ನಡೆಯುತ್ತಿದೆ. ಬೃಹತ್ ಬೆಂಗಳೂರಿನ ಆಡಳಿತ ಹೇಗಿರಬೇಕು ಎನ್ನುವ ಕುರಿತು ಸಮಾಲೋಚಿಸಲಾಯಿತು. ಬೆಂಗಳೂರು ನಗರದಲ್ಲಿ 15 ವಲಯಗಳ ರಚನೆಯಾಗಲಿವೆ. ಹೊಸ ಕಾಯ್ದೆಯಲ್ಲಿ ವಲಯವಾರು ಕಮಿಟಿಗಳನ್ನು ರಚನೆ ಮಾಡಲಾಗುತ್ತದೆ ಮತ್ತು ಆ ವಲಯಗಳಿಗೆ ಸಂಪೂರ್ಣ ಅಧಿಕಾರ ಇರುತ್ತದೆ. ವಲಯವಾರು ಕಮಿಟಿಗಳ ಕೆಳಗೆ ವಾರ್ಡ್ ಕಮಿಟಿ ಇರಲಿವೆ ಎಂದರು. ಕಳೆದ ಮಾರ್ಚ್‌ನಲ್ಲಿ ವಿಧೇಯಕವನ್ನು ವಿಧಾನಸಭೆಯಲ್ಲಿ ಮಂಡಿಸಲಾಯಿತು. ಆದರೆ, ಆಡಳಿತ ಪಕ್ಷದಿಂದಲೇ ವಿರೋಧ ವ್ಯಕ್ತವಾದ ಹಿನ್ನೆಲೆಯಲ್ಲಿ ವಿಧೇಯಕ ಕುರಿತು ಮತ್ತೊಮ್ಮೆ ಚರ್ಚೆ ನಡೆಸಿ ಪರಿಶೀಲನೆ ನಡೆಸುವ ಸಂಬಂಧ ವಿಧಾನಮಂಡಲ ಜಂಟಿ ಪರಿಶೀಲನಾ ಸಮಿತಿಗೆ ವಹಿಸಲಾಗಿತ್ತು. ಸಮಿತಿಯು ಮೊದಲ ಸಭೆ ನಡೆಸಿತು.